ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಹಾನಿಗೊಳಗಾದ ಶಾಲೆಗಳ ಪುನರ್ ನಿರ್ಮಿಸುವ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

405 (435) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019ನೇ ಸಾಲಿನ ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ಸುರಿದ ಭಾರೀ ಮಳೆಯಿಂದ ಹಾಸನ ಜಿಲ್ಲೆಯಲ್ಲಿ ಹಾನಿಗೊಳಗಾಗಿರುವ ಸರ್ಕಾರಿ ಶಾಲೆಗಳೆಷ್ಟು ; ಈ ಪ್ರಕರಣಗಳಿಂದ ಉಂಟಾಗಿರುವ ನಷ್ಟದ ಅಂದಾಜು ಮೊತ್ತವೆಷ್ಟು ; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾನಿಗೊಳಗಾಗಿರುವ ಸರ್ಕಾರಿ ಶಾಲೆಗಳ ಪುನರ್ ನಿರ್ಮಾಣಕ್ಕಾಗಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; ಪುನರ್ ನಿರ್ಮಾಣವಾಗಿರುವ ಶಾಲೆಗಳ ವಿವರ ನೀಡುವುದು ;

(ಇ) ಹಾನಿಗೊಳಗಾಗಿ ಇನ್ನೂ ಪುನರ್ ನಿರ್ಮಾಣವಾಗದ ಸರ್ಕಾರಿ ಶಾಲೆಗಳನ್ನು ನಡೆಸಲು ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ ? (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)